# ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ಗುಬ್ಬಿ

**ದಿನಾಂಕಃ 06.04.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| | ಸತ್ಯ ಪ್ರತಿಜ್ಞೆಯ ಮೇರೆಗೆ |

## ಮುಂದುವರೆದ ಪಾಟೀ ಸವಾಲುಃ- ವಾದಿ ಪರ ವಕೀಲರಾದ ಶ್ರೀ. ಎನ್ ಎಸ್ ರವರಿಂದ

ದಾವಾ ಸ್ವತ್ತಿನಲ್ಲಿ ಮೊದಲು ಭದ್ರಯ್ಯ ರವರು ಸ್ವಾಧೀನದಲ್ಲಿ ಇದ್ದರು ಮತ್ತು ಈಗ ಅವರ ಮಗ ವಾದಿ ತಿಮ್ಮಯ್ಯ ರವರು ಸ್ವಾಧೀನದಲ್ಲಿ ಇರುತ್ತಾರೆ ಎಂದರೆ ಸರಿಯಲ್ಲ. 1985-86 ರಿಂದ 1997-98 ವರೆಗೆ ದಾವಾ ಸ್ವತ್ತಿನ ಖಾತೆ ಮತ್ತು ಪಹಣಿ ಭದ್ರಯ್ಯ ರವರ ಹೆಸರಿನಲ್ಲಿ ಇರುತ್ತದೆ ಎಂದರೆ ಸರಿಯಲ್ಲ. 1997-98 ರಲ್ಲಿ ನೀವು ರೆವೆನ್ಯೂ ಅಧಿಕಾರಿಗಳ ಜೊತೆ ಶರೀಕ್ ಆಗಿ ದಾವಾ ಸ್ವತ್ತಿನ ಖಾತೆಯನ್ನು ಭದ್ರಯ್ಯ ಮತ್ತು ಚಿಕ್ಕರಂಗಯ್ಯ ಎಂದು ನಮೂದಿಸಿದ್ದೀರಿ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು 1995-96 ರಲ್ಲಿ ನನ್ನ ತಂದೆ ಚಿಕ್ಕರಂಗಯ್ಯ ರವರಿಗೆ ಖಾತೆ ಆಗಿರುತ್ತದೆ ಎಂದು ನುಡಿಯುತ್ತಾರೆ. 1999-2000 ರಲ್ಲಿ ನಿಮ್ಮ ತಂದೆಯ ಹೆಸರಿಗೆ ಆರ್ ಟಿ ಸಿ ಮಾಡಿಸಿಕೊಂಡಿದ್ದೀರಿ ಎಂದರೆ ಸರಿಯಲ್ಲ. ಹಿಂದಿನಿಂದ ಭದ್ರಯ್ಯ ರವರು ಸ್ವಾಧೀನದಲ್ಲಿ ಇದ್ದು ಅವರ ಮರಣದ ನಂತರ ಅವರ ಮಗನಾದ ವಾದಿ ತಿಮ್ಮಯ್ಯ ರವರು ದಾವಾ ಸ್ವತ್ತಿನ ಸ್ವಾಧೀನಾನುಭವದಲ್ಲಿ ಇದ್ದಾರೆ ಎಂದರೆ ಸರಿಯಲ್ಲ ಸಾಕ್ಷಿ ಮುಂದುವರೆದು ನನ್ನ ತಂದೆ ಸ್ವಾಧೀನದಲ್ಲಿ ಇದ್ದಾರೆ ಎಂದು ನುಡಿಯುತ್ತಾರೆ.

2. ದಾವಾ ಸ್ವತ್ತು ನಿಮ್ಮ ತಂದೆಗೆ ಹೇಗೆ ಬಂದಿರುತ್ತದೆ ಎಂದರೆ ಸಾಕ್ಷಿಯು ಅದು ಪಿತ್ರಾರ್ಜಿತ ಆಸ್ತಿಯಾಗಿದ್ದು ಅನುಭವದ ಪ್ರಕಾರ ನನ್ನ ತಂದೆಗೆ ಬಂದಿರುತ್ತದೆ ಎಂದು ನುಡಿಯುತ್ತಾರೆ. ನಿಮ್ಮ ಮುಖ್ಯ ವಿಚಾರಣ ಪ್ರಮಾಣ ಪತ್ರವನ್ನು ಯಾರು ಹೇಳಿ

ಬರೆಸಿದ್ದಾರೆ ಎಂದರೆ ನಾನೇ ಬರೆಸಿದ್ದೇನೆ ಎಂದು ನುಡಿಯುತ್ತಾರೆ. ನಿಮ್ಮ ತಂದೆಗೆ ಅನುಭವದ ಮೂಲಕ ಆಸ್ತಿ ಬಂದಿದೆ ಎಂದು ಮುಖ್ಯ ವಿಚಾರಣ ಪ್ರಮಾಣ ಪತ್ರದಲ್ಲಿ ಹೇಳಿ ಬರೆಸಿದ್ದೀರಾ ಎಂದರೆ ಹೌದು ಎಂದು ನುಡಿಯುತ್ತಾರೆ. ಈ ವಿಚಾರವನ್ನು ನೀವು ಮುಖ್ಯ ವಿಚಾರಣ ಪ್ರಮಾಣ ಪತ್ರ ದಲ್ಲಿ ಬರೆಸದೇ ಇದ್ದರೂ ಕೂಡ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ. ನಿಮ್ಮ ತಂದೆಗೆ ಪಂಚಾಯಿತಿ ವಿಭಾಗ ಪತ್ರದ ಮೂಲಕ ಬಂದಿದೆ ಎಂದು ಹೇಳಲಾದ ವಿಭಾಗ ಪತ್ರವನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದೀರಾ ಎಂದರೆ ಸಾಕ್ಷಿಯು ನಮ್ಮ ಬಳಿ ಇರುವುದಿಲ್ಲ ಎಂದು ನುಡಿಯುತ್ತಾರೆ. ದಾವಾ ಅನುಸೂಚಿ ಸ್ವತ್ತನ್ನು ಕಬಳಿಸುವ ಉದ್ದೇಶದಿಂದ ಸುಳ್ಳು ಮುಖ್ಯ ವಿಚಾರಣ ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ. ದಾವಾ ಸ್ವತ್ತಿನಲ್ಲಿ ಇಂದಿಗೂ ವಾದಿಯೇ ಸ್ವಾಧೀನಾನುಭವದಲ್ಲಿ ಇದ್ದಾರೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ**.

ಓ . ಹೇ. ಕೇ. ಸರಿ. ಇದೆ

ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ.,
ಗುಬ್ಬಿ.

Pw1 present he is cross examined by defendant counsel fully .

Defendant counsel prays time for cross of Pw2.

Call on.25.11.2024.